ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

ಣಿಸುವ ವೇಳೆ 97 ಮಂದಿ ವಲಸೆ ಕಾರ್ಮಿಕರು ಮೃತಪಟ್ಟಿದ್ದಾರೆ.

# ಅಧಿವೇಶನ ಮೊಟಕು?

## ಸಂಸದರಿಗೆ ಸೋಂಕು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕ್ರಮ



ನವದೆಹಲಿ: ಸಂಸದರಲ್ಲಿ ಕೊರೋನಾ ಸೋಂಕು ದೊಡ್ಡ ಪ್ರಮಾಣದಲ್ಲಿ ಕಾಣಿಸಿಕೊಂಡಿರುವುದರಿಂದ ಮತ್ತು ದೇಶದಲ್ಲಿ ಸೋಂಕಿತರ ಸಂಖ್ಯೆ ದಿನೇದಿನೇ ಹೆಚ್ಚುತ್ತಿರುವುದರಿಂದ ಸಂಸತ್ತಿನ ಮಳೆಗಾಲದ ಅಧಿವೇಶನವನ್ನು ಒಂದು ವಾರ ಕಡಿತಗೊಳಿಸುವ ಸಾಧ್ಯತೆಯಿದೆ.

ಆರು ತಿಂಗಳ ಸುದೀರ್ಘ ಅಂತರದ ನಂತರ ಸೆ.14ರಿಂದ ಆರಂಭವಾದ ಸಂಸತ್ ಅಧಿವೇಶನ ಅ.1ರವರೆಗೆ 18 ದಿನಗಳ ಕಾಲ ನಡೆಯಬೇಕಿತ್ತು. ಆದರೆ, ಸೋಂಕು ಹರಡುತ್ತಿರುವ ಪ್ರಮಾಣ ತೀವ್ರಗತಿಯಲ್ಲಿ ಹೆಚ್ಚುತ್ತಿರುವುದರಿಂದ ಒಂದು ವಾರದಷ್ಟು ಮೊದಲೇ ಅಧಿವೇಶನ ಮೊಟಕುಗೊಳಿಸುವ ಸಾಧ್ಯತೆಯಿದೆ. ಈ ನಿಟ್ಟಿನಲ್ಲಿ ಶನಿವಾರ ಸಂಸತ್ತಿನ ಕಲಾಪ ಸಮಿತಿಯ ಸದಸ್ಯರು ಸಭೆ ಸೇರಿ ಚರ್ಚಿಸಿದ್ದಾರೆ. ಈ ವೇಳೆ ಬಹುತೇಕ ಸದಸ್ಯರು ಆದಷ್ಟು ಶೀಘ್ರವೇ ಅಧಿವೇಶನ ಮೊಟಕುಗೊಳಿಸಲು ತಮ್ಮ ಒಲವು ವ್ಯಕ್ತಪಡಿಸಿದ್ದಾರೆ. ಆದರೆ ಈ ಕುರಿತು ಸ್ಪೀಕರ್ ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ ಎನ್ನಲಾಗಿದೆ.

ಇಲ್ಲಿಯವರೆಗೆ 30 ಸಂಸದರಲ್ಲಿ ಕೊರೋನಾ ಸೋಂಕು ದೃಢಪಟ್ಟಿದೆ.